# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರು, **"ಮಂಗಳೂರಿನ ವಾಮಂಜೂರಿನಲ್ಲಿ ಡಾ. ಶಿವರಾಮ ಕಾರಂತ ಪಿಲಿಕುಳ ನಿಸರ್ಗಧಾಮವು ದಿನಾಂಕ: 09.03.2018 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರವಾಗಿ ರಚನೆಯಾಗಿದ್ದು, ಸಮಿತಿಯಲ್ಲಿ ಯಾವುದೇ ಜನಪ್ರತಿನಿಧಿಗಳು ಇರುವುದಿಲ್ಲ. ಜಿಲ್ಲಾಧಿಕಾರಿಗಳು ಈ ಪ್ರಾಧಿಕಾರ ಸಹಿತ ಜಿಲ್ಲೆಯ ಅನೇಕ ಪ್ರಾಧಿಕಾರಗಳಿಗೆ ಅಧ್ಯಕ್ಷರಾಗಿರುವುದರಿಂದ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿ ಮತ್ತು ಆಡಳಿತದ ಬಗ್ಗೆ ಪೂರ್ಣವಾಗಿ ಭಾಗವಹಿಸಲು ಮತ್ತು ಸೂಕ್ತ ನಿರ್ಧಾರ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ಈಗಿರುವ ನಿಯಮಗಳಿಗೆ ತಿದ್ದುಪಡಿ ಮಾಡಿ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರವನ್ನು ಅಭಿವೃದ್ಧಿ ಮಂಡಳಿಯನ್ನಾಗಿ ಉನ್ನತೀಕರಿಸಿ, ಪೂರ್ಣಕಾಲಿಕ ಅಧಿಕಾರೇತರ ಅಧ್ಯಕ್ಷರನ್ನು ಮತ್ತು ಸದಸ್ಯರನ್ನೊಳಗೊಂಡ ಆಡಳಿತ ಮಂಡಳಿ ರಚಿಸುವ ವಿಷಯದ ಕುರಿತು"** ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 72 ರ ಮೇರೆಗೆ ಗಮನ ಸೆಳೆಯುವ ಸೂಚನೆಗೆ ಮಾಹಿತಿ ಒದಗಿಸುವ ಬಗ್ಗೆ.

*******

ಪಿಲಿಕುಳ ನಿಸರ್ಗಧಾಮವನ್ನು ಸಮಗ್ರವಾಗಿ ಉನ್ನತೀಕರಣಗೊಳಿಸುವ ಉದ್ದೇಶದಿಂದ ಸರ್ಕಾರದ ಅಧಿಸೂಚನೆ ಸಂಖ್ಯೆ ಸಂವ್ಯಶಾಇ 08 ಶಾಸನ 2018, ಬೆಂಗಳೂರು ದಿನಾಂಕ:09-03-2018 ರನ್ವಯ ಡಾ. ಶಿವರಾಮ ಕಾರಂತ ಪಿಲಿಕುಳ ನಿಸರ್ಗಧಾಮ ಸೊಸೈಟಿ ಮತ್ತು ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ವಿಲೀನಗೊಳಿಸಿ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿರುತ್ತದೆ.

ಈ ಪ್ರಾಧಿಕಾರದ ಮುಖ್ಯ ಉದ್ದೇಶಗಳೆನೆಂದರೆ, ಪಶ್ಚಿಮ ಘಟ್ಟಗಳ ಮತ್ತು ಕರ್ನಾಟಕ ಕರಾವಳಿಯ ಜೀವ ವೈವಿಧ್ಯತೆ, ಪರಂಪರೆ, ಸಂಸ್ಕೃತಿಯ ರಕ್ಷಣೆ ಮತ್ತು ವಿದ್ಯಾರ್ಥಿಗಳಲ್ಲಿ ವಿಜ್ಞಾನ ಕಲಿಕೆಗಾಗಿ ಉತ್ತೇಜಕ ಪರಿಸರವನ್ನು ಸೃಜಿಸಲು ಹಾಗೂ ವಿಜ್ಞಾನ, ತಂತ್ರಜ್ಞಾನ, ಇಂಜಿನಿಯರಿಂಗ್ ಮತ್ತು ಗಣಿತ ಆಧಾರಿತ ಅಭಿವೃದ್ಧಿಗಳ ಬಗ್ಗೆ ಸಾಮಾನ್ಯ ಜನರಲ್ಲಿ ಅರಿವುಂಟು ಮಾಡುವ ಮತ್ತು ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ನೀಡುವುದು.

ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ದೃಷ್ಟಿಯಿಂದ ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿದ್ದು, ಈ ಪ್ರಾಧಿಕಾರದಲ್ಲಿ ಮಂಗಳೂರು ದಕ್ಷಿಣ, ಮಂಗಳೂರು ಉತ್ತರ ಮತ್ತು ಮೂಡುಬಿದರೆ ವಿಧಾನ ಸಭಾ ಕ್ಷೇತ್ರದ ಚುನಾಯಿತ ಪ್ರತಿನಿಧಿಗಳು ಹಾಗೂ ಅಧ್ಯಕ್ಷರು, ಮೂಡಶೆಡ್ಡೆ ಗ್ರಾಮ ಪಂಚಾಯಿತಿ ಇವರು ಸದಸ್ಯರಾಗಿರುತ್ತಾರೆ. ಅಲ್ಲದೆ, ವಿವಿಧ ಇಲಾಖೆಗಳ ಅಧಿಕಾರಿಗಳು ಪದನಿಮಿತ್ತ ಸದಸ್ಯರಾಗಿದ್ದು, ವಿವಿಧ ಕ್ಷೇತ್ರಗಳಲ್ಲಿ ಪರಿಣಿತಿ ಹೊಂದಿರುವ 03 ಮಂದಿ ಸರ್ಕಾರದಿಂದ ನಾಮನಿರ್ದೇಶಿತ ಸರ್ಕಾರೇತರ ಸದಸ್ಯರು ಸಹ ಇರುತ್ತಾರೆ.

ಅದರಂತೆ, ಸರ್ಕಾರಿ ಆದೇಶ ಸಂಖ್ಯೆ: ಐಟಿಬಿಟಿ 253 ಎಸ್‌ಟಿಎಸ್ 2020, ಬೆಂಗಳೂರು ದಿನಾಂಕ: 30.11.2024 ರನ್ವಯ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರ ಸಮಿತಿಗೆ ಈ ಕೆಳಕಂಡ 03. ಸದಸ್ಯರನ್ನು ನಾಮ ನಿರ್ದೇಶನ ಮಾಡಿ ಆದೇಶಿಸಲಾಗಿರುತ್ತದೆ:

1. ಶ್ರೀ ಎನ್.ಜಿ. ಮೋಹನ್, 'ಬೀಟಾ ಏಜೆನ್ಸೀಸ್' ಕದ್ರಿ, ಮಂಗಳೂರು
2. ಪ್ರೊ. ಅಬ್ದುಲ್ ರೆಹಮಾನ್, ಮಂಗಳೂರು
3. ಶ್ರೀ ಶಿವರಾಂ ಮಲ್ಲಿ, ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಮೂಡುಶೆಡ್ಡೆ

ಈ ಸಂಬಂಧ, ಚುನಾಯಿತ ಪ್ರತಿನಿಧಿಗಳು, ಸರ್ಕಾರೇತರ ಸದಸ್ಯರು ಹಾಗೂ ಪದನಿಮಿತ್ತ ಸದಸ್ಯರನ್ನೊಳಗೊಂಡ ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರವು ಸರ್ಕಾರದ ನಿರ್ದೇಶನದಂತೆ ಪಿಲಿಕುಳ ನಿಸರ್ಗಧಾಮವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿದೆ.

ಆದುದರಿಂದ, ಪ್ರಸ್ತುತದಲ್ಲಿರುವ ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ನಿಯಮಗಳ ಕುರಿತು ಮುಂದಿನ ದಿನಗಳಲ್ಲಿ ಪರಿಶೀಲಿಸಲಾಗುವುದು.

ಸಂಖ್ಯೆ: ಐಟಿಬಿಟಿ 299 ಎಸ್ ಟಿಎಸ್ 2024

(ಎನ್.ಎಸ್. ಭೋಸರಾಜು)
ಮಾನ್ಯ ಸಣ್ಣ ನೀರಾವರಿ,
ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು